# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 463

ಉತ್ತರ ದಿನಾಂಕ : 16.02.2023

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಯಾದಗಿರಿ ಜಿಲ್ಲೆಯ ಗುರುಮಿಠಕಲು ತಾಲ್ಲೂಕಿನ ಯಂಪಾಡ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನದಲ್ಲಿ ಮಳೆಗಾಲದಲ್ಲಿಯೂ ಕುಡಿಯುವ ನೀರಿಗಾಗಿ ಸಾರ್ವಜನಿಕರು ಪರಿತಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಯಾದಗಿರಿ ಜಿಲ್ಲೆಯ ಗುರುಮಿಠಕಲು ತಾಲ್ಲೂಕಿನ ಯಂಪಾಡ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನದಲ್ಲಿ ಮಳೆಗಾಲದಲ್ಲಿ ಸಾರ್ವಜನಿಕರು ಕುಡಿಯುವ ನೀರಿಗಾಗಿ ಪರಿತಪಿಸುವಂತಹ ಪ್ರಕರಣ ಕಂಡು ಬಂದಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಯಂಪಾಡ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನದಲ್ಲಿ ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಯಂಪಾಡ ಗ್ರಾಮಕ್ಕೆ ಜಲ ಜೀವನ್ ಮಿಷನ್ ಯೋಜನೆಯಡಿ ಅಂದಾಜು ಮೊತ್ತ ರೂ.107.80 ಲಕ್ಷಗಳ ವೆಚ್ಚದಲ್ಲಿ ಕಾಮಗಾರಿಯನ್ನು ಕೈಗೊಂಡಿದ್ದು, ಸದರಿ ಯೋಜನೆಯ ಮೂಲಕ ಎಲ್ಲಾ ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕಗಳ ಮೂಲಕ ನೀರು ಒದಗಿಸಲಾಗುತ್ತಿದೆ. |
| ಇ) | ಮೇಲ್ಕಂಡ ಗ್ರಾಮ ಪಂಚಾಯಿತಿಯಲ್ಲಿ ಕುಡಿಯುವ ನೀರಿನ ಜಟಿಲ ಸಮಸ್ಯೆಯಿದ್ದರು ನಿರ್ಲಕ್ಷ ಮನೋಭಾವ ಹೊಂದಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಅನ್ವಯಿಸುವುದಿಲ್ಲ. |

ಸಂ:ಗ್ರಾಕುನೀ&ನೈಇ /20/ಅಧೀಕ್ಷಕರು-1/2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ